1630(2018) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ. ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಸಣ್ಣ ಮತ್ತು ದೊಡ್ಡ ಕೆರೆ ಜಲಾಶಯಗಳ ವಿವರಗಳೇನು; ಇವುಗಳ ಹೂಳೆತ್ತುವ ಕಾಮಗಾರಿಗಳನ್ನು ಯಾವಾಗ ಕೈಗೊಳ್ಳಲಾಗುವುದು;

ಆ. ಕೆರೆ ಜಲಾಶಯಗಳನ್ನು ಸುವ್ಯವಸ್ಥಿತ ಗೊಳಿಸುವ ಮೂಲಕ ಅಂತರ್ಜಲ ಮಟ್ಟವನ್ನು ವೃದ್ದಿಸಲು ಸರ್ಕಾರ ಆದ್ಯಾತ ಕ್ರಮಗಳನ್ನು ಕೈಗೊಳ್ಳುವುದೇ;

ಇ. ಸಣ್ಣ ನೀರಾವರಿ ಯೋಜನೆಯಡಿಯಲ್ಲಿ ಬೆಳ್ತಂಗಡಿ ತಾಲ್ಲೂಕಿನಲ್ಲಿ ಕೈಗೊಳ್ಳಲಿರುವ ನೂತನ ಕಾಮಗಾರಿಗಳ ವಿವರಗಳೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ(ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು):

ಅ.ಬೆಳ್ತಂಗಡಿ ತಾಲ್ಲೂಕಿನಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ನಿರ್ವಹಿಸಲ್ಪಡುವ ಕೆರೆಗಳು ಇರುವುದಿಲ್ಲ. ಆದುದರಿಂದ, ಇವುಗಳ ಹೂಳೆತ್ತುವ ಪ್ರಶ್ನೆ ಉದ್ಭವಿಸುವುದಿಲ್ಲ.

ಆ.ಉದ್ಭವಿಸುವುದಿಲ್ಲ.

ಇ.ನಬಾರ್ಡ್ ಯೋಜನೆಯಡಿ ಬೆಳ್ತಂಗಡಿ ತಾಲ್ಲೂಕಿನ ಗಿಳಿಕಾಪು ಎಂಬಲ್ಲಿ ರೂ.50.00 ಲಕ್ಷ ಮೊತ್ತದಲ್ಲಿ ಫಲ್ಗುಣಿ ನದಿಗೆ ಅಡ್ಡಲಾಗಿ ಕಿಂಡಿ ಅಣೆಕಟ್ಟು ನಿರ್ಮಾಣ ಹಾಗೂ ಶಿಶಿಲ ಗ್ರಾಮದಲ್ಲಿ ರೂ. 60.00 ಲಕ್ಷ ಮೊತ್ತದಲ್ಲಿ ಕಿಂಡಿ ಅಣೆಕಟ್ಟು ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು.

1631(2125) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ. ಬೆಳ್ತಂಗಡಿ ತಾಲ್ಲೂಕು ಕೇಂದ್ರದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣವು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರವು ಏನು ಕ್ರಮ ಕೈಗೊಂಡಿದೆ;

ಇ. ಸಂಸ್ಥೆಯು ರಾತ್ರಿ ಬಸ್ಸುಗಳಲ್ಲಿ ಚಾಲಕ ಮತ್ತು ನಿರ್ವಾಹಕ ಕೆಲಸವು ಒಬ್ಬರಿಂದಲೇ ನಡೆಸುತ್ತಿರುವುದರಿಂದ ಪ್ರಯಾಣಿಕರಿಗೆ ಆಗುತ್ತಿರುವ ತೊಂದರೆಯ ವಿಚಾರವು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಕ್ರಮಗಳೇನು;

ಈ. ಹೆಚ್ಚಿನ ಗ್ರಾಮೀಣ ಪ್ರದೇಶಗಳಿಗೆ ಸಂಸ್ಥೆಯ ವತಿಯಿಂದ ಸಾರಿಗೆ ಸಂಪರ್ಕವನ್ನು ಕಲ್ಪಿಸುವ ಸಲುವಾಗಿ ಸಂಸ್ಥೆಯು ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ; ಅದರ ವಿವರಗಳೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು) :

ಅ. ಹೌದು.

ಆ. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಸಾರಿಗೆಗಳು ಪ್ರಸ್ತುತ ಬೆಳ್ತಂಗಡಿಯ ಮುನಿಸಿಪಲ್ ಬಸ್ ನಿಲ್ದಾಣದ ಮುಖೇನ ಆಚರಣೆಗೊಳ್ಳುತ್ತಿವೆ.

ಇ. ಬಂದಿದೆ.

ನಿರ್ವಾಹಕರನ್ನು ನಿಯೋಜಿಸಿದೆ.

ಈ. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ರಾಷ್ಟ್ರೀಕೃತವಾದ ವಲಯದಲ್ಲಿ ಬರುವ ಒಟ್ಟು 7,293 ಗ್ರಾಮಗಳ ಪೈಕಿ 6,743 ಗ್ರಾಮಗಳಿಗೆ ಸಾರಿಗೆ ಸೌಲಭ್ಯವನ್ನು ಕಲ್ಪಿಸಿದೆ, ಅಂತೆಯೇ, ರಾಷ್ಟ್ರೀಕೃತವಾಗದ ವಲಯದಲ್ಲಿ ಬರುವ 11,789 ಗ್ರಾಮಗಳ ಪೈಕಿ, 5,158 ಗ್ರಾಮಗಳಿಗೆ ಸಾರಿಗೆ ಸೌಲಭ್ಯವನ್ನು ಕಲ್ಪಿಸಿದೆ.